<u>ಕರ್ನಾಟಕ ವಿಧಾನ ಪರಿಷತ್ತು</u>

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | : | 472 |
| ಸದಸ್ಯರ ಹೆಸರು | : | ಶ್ರೀ ಹೆಚ್.ಪಿ. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 14-08-2025 |
| ಉತ್ತರಿಸುವ ಸಚಿವರು | : | ಮಾನ್ಯ ಉಪ ಮುಖ್ಯಮಂತ್ರಿ |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ನೀರಾವರಿ ಯೋಜನೆಗಳಲ್ಲಿ ಕೃಷ್ಣಾ ಮೇಲ್ದಂಡೆ ಯೋಜನೆ ಅತ್ಯಂತ ಪ್ರಮುಖವಾಗಿದ್ದು, ಇಲ್ಲಿಯವರೆಗೆ ಶೇ. 50 ರಷ್ಟನ್ನು 60 ವರ್ಷಗಳ ಅವಧಿಯಲ್ಲಿ ಸಾಧನೆ ಮಾಡಿಲ್ಲದಿರುವುದು ಸರ್ಕಾರದ ಗಮನದಲ್ಲಿದೆಯೇ; | ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-1 ಮತ್ತು 2ರ ನೀರಾವರಿ ಯೋಜನೆಗಳನ್ನು 2009-10ನೇ ಸಾಲಿನಲ್ಲಿ ಪೂರ್ಣಗೊಳಿಸಿ 6.20 ಲಕ್ಷ ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯವನ್ನು ಕಲ್ಪಿಸಲಾಗಿರುತ್ತದೆ.<br><br>ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3 ರ ಅಡಿಯಲ್ಲಿ ಬರುವ 09 ಉಪ ಯೋಜನೆಗಳನ್ನು ಅನುದಾನ ಲಭ್ಯತೆ ಅನುಸಾರ ಕೈಗೆತ್ತಿಕೊಂಡಿದ್ದು, 5.94 ಲಕ್ಷ ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಒದಗಿಸುವ ಕ್ಷೇತ್ರದ ಪೈಕಿ ಇಲ್ಲಿಯವರೆಗೂ 1.44 ಲಕ್ಷ ಹೆಕ್ಟೇರ್ ಅಚ್ಚುಕಟ್ಟು ಪ್ರದೇಶಕ್ಕೆ ನೀರಾವರಿ ಸಾಮರ್ಥ್ಯ ಕಲ್ಪಿಸಲಾಗಿದೆ.<br><br>ಹಂತ-3ರ ಆಲಮಟ್ಟಿ ಅಣೆಕಟ್ಟೆಯ ಗೇಟ್‌ನ್ನು 519.600ಮೀ. ರಿಂದ 524.256ಮೀ. ವರೆಗೆ ಎತ್ತರಿಸುವ ವಿಷಯವು ಕೇಂದ್ರ ಸರ್ಕಾರದಿಂದ ಕೃಷ್ಣಾ ನ್ಯಾಯಾಧೀಕರಣ-2ರ ಅಂತಿಮ ತೀರ್ಪು ಗೆಜೆಜ್ ಅಧಿಸೂಚನೆಗೆ ಒಳಪಟ್ಟಿದ್ದು, ಐತೀರ್ಪು ಇನ್ನೂ ಅಧಿಸೂಚನೆ ಆಗಬೇಕಾಗಿದೆ.<br><br>ದಿನಾಂಕ:16.09.2011ರ ಮಾನ್ಯ ಸರ್ವೋಚ್ಚ ನ್ಯಾಯಾಲಯದ ತೀರ್ಪಿನಲ್ಲಿ ಕೃಷ್ಣಾ ನ್ಯಾಯಾಧೀಕರಣ-2ರ ಅಂತಿಮ ತೀರ್ಪನ್ನು ಗೆಜೆಟ್ ಪ್ರಕಟಣೆ ಮಾಡದಂತೆ ಕೇಂದ್ರ ಸರ್ಕಾರಕ್ಕೆ ಆದೇಶಿಸಲಾಗಿದ್ದು, ಸದರಿ ತೀರ್ಪನ್ನು ಮಾರ್ಪಡಿಸುವಂತೆ ಕೋರಿ ರಾಜ್ಯ ಸರ್ಕಾರವು ಮಾನ್ಯ ಸರ್ವೋಚ್ಚ ನ್ಯಾಯಾಲಯಕ್ಕೆ ಮಧ್ಯಕಾಲೀನ ಅರ್ಜಿಗಳನ್ನು ಸಲ್ಲಿಸಿದೆ. ಕೃಷ್ಣಾ ನ್ಯಾಯಾಧೀಕರಣದ ಅಂತಿಮ ತೀರ್ಪನ್ನು ಗೆಜೆಟ್ ಅಧಿಸೂಚನೆ ಹೊರಡಿಸುವ ಬಗ್ಗೆ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶವನ್ನು ಮಾರ್ಪಡಿಸಲು ಸೂಕ್ತ ಅಫಿಡವಿಟ್ ಸಲ್ಲಿಸಿ ನಂತರ ನ್ಯಾಯಾಧೀಕರಣದ ಆದೇಶವನ್ನು ಪ್ರಕಟಿಸಲು ಅಗತ್ಯ ಕ್ರಮ ಕೈಗೊಳ್ಳಲು ನಿರಂತರವಾಗಿ ಕೇಂದ್ರ ಸರ್ಕಾರವನ್ನು ಕೋರಲಾಗುತ್ತಿದೆ. ಸದರಿ ವಿಷಯದ ಕುರಿತು ರಾಜ್ಯ ಸರ್ಕಾರವು ಎಲ್ಲಾ ಆಡಳಿತಾತ್ಮಕ ಹಾಗೂ ಕಾನೂನಾತ್ಮಕ ಕ್ರಮಗಳನ್ನು ಕೈಗೊಂಡಿರುತ್ತದೆ. |

<table>
<tr>
<td>(ಆ)</td>
<td>ಸಂತ್ರಸ್ಥರ ಪುನರ್ವಸತಿ, ಪುನರ್ ನಿರ್ಮಾಣ ಕಾರ್ಯಗಳು ಕೂಡಾ ಆಮೆಗತಿಯಲ್ಲಿ ಸಾಗುತ್ತಿದ್ದು, ಕೃಷ್ಣಾ ಮೇಲ್ದಂಡೆ ಯೋಜನೆ (ಯುಕೆಪಿ) ಭೂಸ್ವಾಧೀನ, ಪುನರ್ವಸತಿ ಮತ್ತು ಪುನರ್ ನಿರ್ಮಾಣ (ಆರ್ & ಆರ್) ಆಯುಕ್ತರ ಹುದ್ದೆ ಸೇರಿದಂತೆ ಜವಾನರವರೆಗೂ ಬಹುಪಾಲು ಹುದ್ದೆಗಳಲ್ಲಿ ಪ್ರಭಾರಿಗಳೇ ಕಾರ್ಯನಿರ್ವಹಿಸುತ್ತಿರುವುದರಿಂದ ಸಂತ್ರಸ್ಥರು ಖಾಯಂ ಅಧಿಕಾರಿಗಳು ಇಲ್ಲದ ಕಾರಣಕ್ಕಾಗಿ ಸಮಯಕ್ಕೆ ಸರಿಯಾಗಿ ಅವಶ್ಯಕ ದಾಖಲೆಗಳನ್ನು (ಹಕ್ಕು ಪತ್ರ ಎನ್.ಓ.ಸಿ) ಪಡೆಯಲು ತೊಂದರೆ ಅನುಭವಿಸುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;</td>
<td rowspan="3">ಕೃಷ್ಣ ಮೇಲ್ದಂಡೆ ಯೋಜನೆಯ ಭೂಸ್ವಾಧೀನ ಹಾಗೂ ಪುನರ್ವಸತಿ ಮತ್ತು ಪುನರ್ ನಿರ್ಮಾಣಕ್ಕೆ ಸಂಬಂಧಿಸಿದಂತೆ ಆಯುಕ್ತರು, ಕಂದಾಯ ಆಯುಕ್ತಾಲಯ ಇವರಿಗೆ ಹೆಚ್ಚುವರಿಯಾಗಿ ಆಯುಕ್ತರು (ಕೃ.ಮೇ.ಯೋ), ಭೂಸ್ವಾಧೀನ ಹಾಗೂ ಪುನರ್ವಸತಿ ಮತ್ತು ಪುನರ್ ನಿರ್ಮಾಣ ಹುದ್ದೆಯ ಪ್ರಭಾರದಲ್ಲಿ ಇರಿಸಲಾಗಿದೆ ಹಾಗೂ ವಿವಿಧ ಇಲಾಖೆಗಳಿಂದ ಅಧಿಕಾರಿ/ನೌಕರರುಗಳನ್ನು ಎರವಲು ಆಧಾರದ ಮೇಲೆ ಭರ್ತಿ ಮಾಡಲಾಗುತ್ತಿರುವುದರಿಂದ, ಯಾವುದೇ ಅಭಿವೃದ್ಧಿ ಕಾಮಗಾರಿಗಳು ಕುಂಠಿತವಾಗದಂತೆ ಕ್ರಮ ವಹಿಸಲಾಗುತ್ತಿದೆ.<br><br>ಕೃಷ್ಣ ಮೇಲ್ದಂಡೆ ಯೋಜನೆಯಡಿ ಆಯುಕ್ತರು, ಪುನರ್ವಸತಿ ಮತ್ತು ಪುನರ್ ನಿರ್ಮಾಣ, ಭೂಸ್ವಾಧೀನ, ಬಾಗಲಕೊಟೆ ಇವರ ಕಛೇರಿ ಹಾಗೂ ಇವರ ಅಧೀನಕೊಳ್ಳಪಡುವ ಕಛೇರಿಗಳ ಹುದ್ದೆಗಳ ವಿವರ:<br><br>
<table>
<tr><th>ಕ್ರ ಸಂ</th><th>ವೃಂದ</th><th>ಮಂಜೂರಾದ ಹುದ್ದೆಗಳ ಸಂಖ್ಯೆ</th><th>ಭರ್ತಿಯಾದ ಹುದ್ದೆಗಳ ಸಂಖ್ಯೆ</th><th>ಖಾಲಿ ಹುದ್ದೆಗಳ ಸಂಖ್ಯೆ</th></tr>
<tr><td>1.</td><td>ಗ್ರೂಪ್-ಎ</td><td>47</td><td>20</td><td>27</td></tr>
<tr><td>2.</td><td>ಗ್ರೂಪ್- ಬಿ</td><td>114</td><td>36</td><td>78</td></tr>
<tr><td>3.</td><td>ಗ್ರೂಪ್- ಸಿ</td><td>541</td><td>265</td><td>276</td></tr>
<tr><td>4.</td><td>ಗ್ರೂಪ್-ಡಿ</td><td>133</td><td>26</td><td>107</td></tr>
<tr><td></td><td>ಒಟ್ಟು</td><td>835</td><td>347</td><td>488</td></tr>
</table>
<br>ಜಲಸಂಪನ್ಮೂಲ ಇಲಾಖೆಯಲ್ಲಿ 100 ಸಹಾಯಕ ಇಂಜಿನಿಯರ್ ಹಾಗೂ 300 ಕಿರಿಯ ಇಂಜಿನಿಯರ್ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆಯು ಚಾಲ್ತಿಯಲ್ಲಿರುತ್ತದೆ. ಪ್ರಸ್ತುತ, ದ್ವಿತೀಯ ದರ್ಜೆ ಸಹಾಯಕರ ಬ್ಯಾಕ್‌ಲಾಗ್ ಹುದ್ದೆಗಳನ್ನು ಸಹ ಭರ್ತಿ ಮಾಡುವ ಪ್ರಕ್ರಿಯೆಯು ಚಾಲ್ತಿಯಲ್ಲಿದ್ದು, ಸದರಿ ನೇಮಕಾತಿಗಳನ್ನು ಮಾಡುವ ಸಂದರ್ಭದಲ್ಲಿ ಕೃಷ್ಣಾ ಮೇಲ್ದಂಡೆ ಯೋಜನೆಗೂ ಸಹ ಅಗತ್ಯತೆಗನುಗುಣವಾಗಿ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.</td>
</tr>
<tr>
<td>(ಇ)</td>
<td>ಈ ವಿಭಾಗದಲ್ಲಿ ಎಷ್ಟು ಮತ್ತು ಯಾವ ಯಾವ ಗ್ರೇಡ್ ಹುದ್ದೆಗಳು ಖಾಲಿ ಇವೆ: (ಸಂಪೂರ್ಣ ವಿವರ ನೀಡುವುದು)</td>
</tr>
<tr>
<td>(ಈ)</td>
<td>ಹಾಗಿದ್ದಲ್ಲಿ, ಈ ಹುದ್ದೆಗಳನ್ನು ಖಾಯಂ ಆಗಿ ಭರ್ತಿ ಮಾಡುವುದು ಯಾವಾಗ? (ವಿವರ ನೀಡುವುದು)</td>
</tr>
</table>

ಸಂಖ್ಯೆ:ಜಸಂಇ 169 ಸೇಇಸಿ 2025

(ಡಿ.ಕೆ. ಶಿವಕುಮಾರ್)
ಉಪ ಮುಖ್ಯಮಂತ್ರಿ